# ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **2724**
ಸದಸ್ಯರ ಹೆಸರು : ಶ್ರೀ ಮಹೇಶ್ ಟೆಂಗಿನಕಾಯಿ (ಹುಬ್ಬಳ್ಳಿ-ಧಾರವಾಡ ಕೇಂದ್ರೀಯ)
ಉತ್ತರಿಸುವ ಸಚಿವರು : ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು
ಉತ್ತರಿಸಬೇಕಾದ ದಿನಾಂಕ : **24-03-2026**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಧಾರವಾಡ ಜಿಲ್ಲೆಯಲ್ಲಿರುವ ವಿವಿಧ ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ಸಾರ್ವಜನಿಕರಿಗೆ ಮತ್ತು ನ್ಯಾಯವಾದಿಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಈ ನ್ಯಾಯಾಲಯಗಳನ್ನು ಅತ್ಯಾಧುನಿಕ ಡಿಜಿಟಲ್ ಮೂಲಭೂತ ಸೌಕರ್ಯದೊಂದಿಗೆ ಮೇಲ್ದರ್ಜೆಗೇರಿಸಲು ಮಂಜೂರಾದ ಅನುದಾನ ಎಷ್ಟು; | ಧಾರವಾಡ ಜಿಲ್ಲೆಯಲ್ಲಿರುವ ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ಸಾರ್ವಜನಿಕರಿಗೆ ಮತ್ತು ನ್ಯಾಯವಾದಿಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳು ಇರುತ್ತದೆ. |
| (ಆ) | ಈ ಜಿಲ್ಲೆಯ ನ್ಯಾಯಾಲಯಗಳಲ್ಲಿ ನ್ಯಾಯಾಧೀಶರ ಹಾಗೂ ನ್ಯಾಯಾಂಗ ಸಿಬ್ಬಂದಿಗಳ ಎಷ್ಟು ಹುದ್ದೆಗಳು ಖಾಲಿ ಇವೆ; ಹುದ್ದೆಗಳ ಕೊರತೆಯಿಂದಾಗಿ ಪ್ರಕರಣಗಳ ವಿಲೇವಾರಿ ವಿಳಂಬವಾಗುತ್ತಿರುವುದನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಿಗೆ ತ್ವರಿತವಾಗಿ ನ್ಯಾಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ದಿನಾಂಕ : 31-01-2026 ರವರೆಗೆ ಧಾರವಾಡ ಜಿಲ್ಲೆಯ ನ್ಯಾಯಾಲಯಗಳಲ್ಲಿ ನ್ಯಾಯಾಧೀಶರ 06 ಹುದ್ದೆಗಳು ಹಾಗೂ ನ್ಯಾಯಾಂಗ ಸಿಬ್ಬಂದಿಗಳ 123 ಹುದ್ದೆಗಳು ಖಾಲಿಯಿರುತ್ತವೆ.<br>ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. |
| (ಇ) | ಈ ಜಿಲ್ಲೆಯಲ್ಲಿ ನೋಂದಾಯಿತ ಖಾಸಗಿ ವಕೀಲರ ಸಂಖ್ಯೆ ಎಷ್ಟು ಮತ್ತು "ಕರ್ನಾಟಕ ವಕೀಲರ ಕ್ಷೇಮನಿಧಿ"ಯ ಅಡಿಯಲ್ಲಿ ನೀಡಲಾಗುತ್ತಿರುವ ಮರಣ ಪರಿಹಾರ ಹಾಗೂ ನಿವೃತ್ತಿ ಸೌಲಭ್ಯದ ಮೊತ್ತವನ್ನು ಪ್ರಸ್ತುತ ಆರ್ಥಿಕ ಸ್ಥಿತಿಗತಿಗೆ ಅನುಗುಣವಾಗಿ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕರ್ನಾಟಕ ರಾಜ್ಯ ವಕೀಲರ ಪರಿಷತ್ತು, ಬೆಂಗಳೂರು ಇಲ್ಲಿ ಧಾರವಾಡ ಜಿಲ್ಲೆಯಿಂದ 5,582 ವಕೀಲರುಗಳು ನೋಂದಾಯಿಸಿರುತ್ತಾರೆ.<br><br>ಹೌದು, ಅಧ್ಯಕ್ಷರು, ಕರ್ನಾಟಕ ರಾಜ್ಯ ವಕೀಲರ ಪರಿಷತ್ತು, ಬೆಂಗಳೂರು ಇವರ ಕಛೇರಿಯಿಂದ "ಕರ್ನಾಟಕ ವಕೀಲರ ಕ್ಷೇಮನಿಧಿ"ಯ ಅಡಿಯಲ್ಲಿ ನೀಡಲಾಗುತ್ತಿರುವ ಮರಣ ಪರಿಹಾರ ಹಾಗೂ ನಿವೃತ್ತಿ ಸೌಲಭ್ಯದ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| (ಈ) | ವೃತ್ತಿ ಆರಂಭಿಸುವ ಯುವ ನ್ಯಾಯವಾದಿಗಳಿಗೆ ಆರ್ಥಿಕ ನೆರವು ನೀಡಲು ಮಾಸಿಕ ಗೌರವಧನ (Stipend) ನೀಡುವ ಯೋಜನೆಯು ಧಾರವಾಡ ಜಿಲ್ಲೆಯಲ್ಲಿ ಎಷ್ಟು ಜನರಿಗೆ ತಲುಪುತ್ತಿದೆ; ಈ ಯೋಜನೆಯಡಿ ಇರುವ ವಾರ್ಷಿಕ ಆದಾಯ ಮಿತಿಯನ್ನು ಸಡಿಲಗೊಳಿಸಿ ಯುವ ವಕೀಲರಿಗೆ ಹೆಚ್ಚು ಅನುಕೂಲ ಮಾಡಿಕೊಡಲು ಸರ್ಕಾರ ಕ್ರಮ ವಹಿಸುವುದೇ; | ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ಪಾವತಿಸುವ ಯೋಜನೆಯನ್ನು 2024-25ನೇ ಸಾಲಿಗೆ ಮುಂದುವರೆಸಲಾಗಿದೆ. ಅದರಂತೆ, ಧಾರವಾಡ ಜಿಲ್ಲೆಯಿಂದ 23 ನವ ಕಾನೂನು ಪದವೀಧರರು ಯೋಜನೆಯಡಿ ಆಯ್ಕೆಯಾಗಿರುತ್ತಾರೆ.<br><br>ಈ ಯೋಜನೆಯಡಿಯಲ್ಲಿನ ವಾರ್ಷಿಕ ವರಮಾನ ಮಿತಿಯನ್ನು ಪುನರ್‌ಪರಿಶೀಲಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

| | | |
|---|---|---|
| (ಉ) | ಖಾಸಗಿ ವಕೀಲರು ಮತ್ತು ಅವರ ಕುಟುಂಬದವರಿಗೆ ಸರ್ಕಾರಿ ನೌಕರರ ಮಾದರಿಯಲ್ಲಿ ಅಥವಾ ವಿಶೇಷ ಯೋಜನೆಯಡಿ ರಿಯಾಯಿತಿ ದರದ "ಆರೋಗ್ಯ ವಿಮೆ" (Health Insurance) ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಈ ಯೋಜನೆಯನ್ನು ಧಾರವಾಡ ಜಿಲ್ಲೆಯ ಎಲ್ಲಾ ವಕೀಲರ ಸಂಘಗಳ ಸದಸ್ಯರಿಗೆ ವಿಸ್ತರಿಸಲಾಗುವುದೇ? | ಇಲ್ಲ. ಆದರೆ, ರಾಜ್ಯದ ವಕೀಲರಿಗೆ ಆರೋಗ್ಯ ಸೌಲಭ್ಯ ಕಾರ್ಯಕ್ರಮವನ್ನು ರೂಪಿಸಲು ಅನುವಾಗುವಂತೆ ಮೂಲನಿಧಿ (Corpus Fund) ಸ್ಥಾಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಲಾ-ಎಲ್‌ಎಡಿ/189/2026**

(ಎಚ್. ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು